ಸಾಗುವಳಿ ಚೀಟಿ ಪಡೆದಿರುವ ರೈತರಿಗೆ ರಕ್ಷಣೆ

27 (48) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

(ಅ) ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕಿನಲ್ಲಿ (ಸಿ ಅಂಡ್ ಡಿ ಲ್ಯಾಂಡ್) ಈ ಹಿಂದೆ ಕಂದಾಯ ಇಲಾಖೆಯ ಅಧೀನದಲ್ಲಿದ್ದಾಗ ಸಾಗುವಳಿ ಮಾಡುತ್ತಿದ್ದ ರೈತರಿಗೆ ಸಾಗುವಳಿ ಚೀಟಿ ನೀಡಿದ್ದು, ಈಗ ಅವರನ್ನು ಒಕ್ಕಲೆಬ್ಬಿಸುವ ಪ್ರಯತ್ನಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹಿಂದೆ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿದ್ದು ಈಗ ಅರಣ್ಯ ಇಲಾಖೆ ವ್ಯಾಪ್ತಿಗೆ ಬಂದಿರುವ ಮಧುಗಿರಿ ತಾಲ್ಲೂಕಿನ ಒಟ್ಟು ಭೂಮಿಯ ವಿಸ್ತೀರ್ಣವೆಷ್ಟು ;

(ಇ) ಹಾಗಿದ್ದಲ್ಲಿ, ಕಂದಾಯ ಇಲಾಖೆಯಿಂದ ಸಾಗುವಳಿ ಚೀಟಿ ಪಡೆದು ವ್ಯವಸಾಯ ಮಾಡುತ್ತಿದ್ದ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಕಂದಾಯ ಇಲಾಖೆಯಿಂದ ಅರಣ್ಯ ಇಲಾಖೆಗೆ ಭೂಮಿ ವರ್ಗಾವಣೆಯಿಂದ ಸಾಗುವಳಿ ಮಾಡುತ್ತಿದ್ದ ರೈತರಿಗೆ ಸರ್ಕಾರ ಭೂಮಿ ವಾಪಸ್ಸು ಕೊಡಲು ಯಾವ ಕ್ರಮ ಕೈಗೊಂಡಿದೆ ? (ಪೂರ್ಣ ವಿವರ ನೀಡುವುದು)

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು) :–

(ಅ) ಇಲ್ಲ.

(ಆ) ಉದ್ಭವಿಸುವುದಿಲ್ಲ.

(ಇ) ಉದ್ಭವಿಸುವುದಿಲ್ಲ.

(ಈ) ಪರಿಶೀಲಿಸಲಾಗುತ್ತಿದೆ.

ಎತ್ತಿನಹೊಳೆ ಯೋಜನೆಯನ್ನು ತ್ವರಿತಗತಿಯಲ್ಲಿ ಪ್ರಾರಂಭಿಸುವುದು

29 (50) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ) :– ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

(ಅ) ಎತ್ತಿನಹೊಳೆ ಯೋಜನೆಯ ಕಾರ್ಯ ತ್ವರಿತಗತಿಯಲ್ಲಿ ನಡೆಯದೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ತ್ವರಿತಗತಿಯಲ್ಲಿ ಯೋಜನೆಯ ಕಾರ್ಯಗಳು ನಡೆಯಲು ಸೂಕ್ತ ಕ್ರಮ ಕೈಗೊಳ್ಳಲಾಗುವುದೇ ;

(ಇ) ಹಾಗಾದರೆ, ಯಾವಾಗ ಪ್ರಾರಂಭಿಸಲಾಗುವುದು ಮತ್ತು ಯಾವ ಕಾಲಮಿತಿಯೊಳಗೆ ಯೋಜನೆ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

ಶ್ರೀ ಎಂ.ಬಿ. ಪಾಟೀಲ (ಮಾನ್ಯ ಜಲಸಂಪನ್ಮೂಲ ಸಚಿವರು) :–

(ಅ) ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ವಿವರವಾದ ಪರಿಷ್ಕೃತ ವಿಸ್ತೃತ ಯೋಜನಾ ವರದಿಗೆ ಒಟ್ಟಾರೆ ಅಂದಾಜು ಮೊತ್ತ ರೂ. 12912.36 ಕೋಟಿಗಳಿಗೆ ಸರ್ಕಾರದ ಆದೇಶ ಸಂ. ಜಸಂಇ 203 ವಿಬ್ಯಾಇ 2012, ಬೆಂಗಳೂರು ದಿನಾಂಕ : 17.02.2014 ರಲ್ಲಿ ಪರಿಷ್ಕೃತ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಅದರಂತೆ Lift component ಕಾಮಗಾರಿಗಳನ್ನು 5 ಪ್ಯಾಕೇಜುಗಳಾಗಿ ವಿಂಗಡಿಸಿ ದಿನಾಂಕ : 13–2–2014 ರಂದು ನಡೆದ ನಿಗಮದ 63 ನೇ ಮಂಡಳಿ ಸಭೆಯಲ್ಲಿ ಟೆಂಡರುಗಳಿಗೆ ಅನುಮೋದನೆ ನೀಡಿದೆ. ಮತ್ತು ನಿಗಮದ ನಿಯಮಾವಳಿಯಂತೆ ಗುತ್ತಿಗೆದಾರರೊಂದಿಗೆ ಕರಾರು ಪತ್ರ ಮಾಡಿಕೊಂಡು ಕಾರ್ಯಾದೇಶ ನೀಡಲಾಗಿದೆ. ಟೆಂಡರ್ ಕರಾರು ನಿಯಮಾವಳಿಗಳಂತೆ, ಗುತ್ತಿಗೆದಾರರು ಕಾಮಗಾರಿಗಳ ವಿವರವಾದ ಸರ್ವೆ ಕೈಗೊಂಡಿದ್ದು, ವಿನ್ಯಾಸಗಳನ್ನು ತಯಾರಿಸಿ, ವಿವರವಾದ ಯೋಜನಾ ವರದಿ ತಯಾರಿಸಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ಕಾಮಗಾರಿಯ ಅನುಷ್ಠಾನಗೊಳಿಸಲು ಕ್ರಮ ಜರುಗಿಸುತ್ತಿದ್ದಾರೆ.

ಹೀಗೆ ಎತ್ತಿನಹೊಳೆ ಯೋಜನೆ ಅನುಷ್ಠಾನಕ್ಕೆ ಅಗತ್ಯ ಕ್ರಮ ಜರುಗಿಸಲಾಗುತ್ತಿದ್ದು, ವಿಳಂಬಕ್ಕೆ ಆಸ್ಪದ ನೀಡಿರುವುದಿಲ್ಲ.

(ಆ) ಎತ್ತಿನಹೊಳೆ ಯೋಜನೆಯ ಅನುಷ್ಠಾನಕ್ಕೆ ಮೇಲೆ ವಿವರಿಸಿದಂತೆ ಅವಶ್ಯ ಕ್ರಮ ಜರುಗಿಸಲಾಗುತ್ತಿದೆ.

(ಇ) ಈಗಾಗಲೇ ಏತ ಕಾಮಗಾರಿಗಳಿಗೆ Lift component ನ 5 ಪ್ಯಾಕೇಜುಗಳಿಗೆ ಮಾರ್ಚ್–2014ರಲ್ಲಿ ಗುತ್ತಿಗೆದಾರರನ್ನು ನೇಮಿಸಿದ್ದು, ಟೆಂಡರು ಕರಾರಿನಂತೆ ಗುತ್ತಿಗೆದಾರರು ವಿವರವಾದ ಸರ್ವೇಕ್ಷಣೆ ಕೈಗೊಂಡಿದ್ದು, ವಿನ್ಯಾಸಗಳನ್ನೊಳಗೊಂಡ ಯೋಜನಾ ವರದಿಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು, ಕಾಮಗಾರಿಗಳನ್ನು ಅನುಷ್ಠಾನಕ್ಕೆ ಕೈಗೆತ್ತಿಕೊಳ್ಳಲಾಗುವುದು. ಅದರಂತೆ ಪ್ರಕ್ರಿಯೆ ಪ್ರಗತಿಯಲ್ಲಿದೆ. ಸದರಿ ಕಾಮಗಾರಿಗಳನ್ನು 4 ವರ್ಷಗಳಲ್ಲಿ ಪೂರ್ತಿಗೊಳಿಸಲು ಉದ್ದೇಶಿಸಲಾಗಿದೆ.